**1 ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಸಿ.ಸಿ.ನಂ.1666/2022.**

**ದಿನಾಂಕಃ 19-10-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು : | ಪ್ರಸನ್ನ | ಚಾಸಾ-3, ಪ್ರಾಸ-2 |
| ತಂದೆಯ ಹೆಸರು : | ರಂಗಪ್ಪ | |
| ವಯಸ್ಸು : | 50 ವರ್ಷ | |
| ಉದ್ಯೋಗ : | ವ್ಯವಸಾಯ | |
| ವಾಸ : | ಸೋಮನಹಳ್ಳಿ ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಆರೋಪಿಯ ಪರಿಚಯವಿದೆ. ನಿಪಿ 1 ರಲ್ಲಿರುವ ಹೆಬ್ಬೆಟ್ಟಿನ ಗುರುತನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಈಗಾಗಲೇ ಗುರುತಿಸಿರುವ ನಿಪಿ 3 ರಲ್ಲಿನ ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿರುತ್ತಾರೆ. ನಿಪಿ 1 ಮತ್ತು 3 ಕ್ಕೆ ನಾನು ಹೊಲದಿಂದ ಬರುತ್ತಿದ್ದಾಗ ಪೊಲೀಸರು ಸಹಿ ಮಾಡು ಎಂದು ಹೇಳಿದ ಕಾರಣಕ್ಕಾಗಿ ಸೋಮನಹಳ್ಳಿ ರಸ್ತೆಯಲ್ಲಿ ಹೆಬ್ಬೆಟ್ಟಿನ ಗುರುತು ಹಾಕಿರುತ್ತೇನೆ. ಸಾಕ್ಷಿಯು ಈಗಾಗಲೇ ಗುರುತಿಸಿರುವ ಮು ಮಾ 1 ರಲ್ಲಿ ಹೆಬ್ಬೆಟ್ಟು ಹಾಕಿರುತ್ತೇನೆ ಎಂದು ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ 4 ರ ಫೋಟೋದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ  ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು  ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ29.01.2022 ರಂದು ಸಂಜೆ 7.5 ರಿಂದ 7.35 ಗಂಟೆಯ ತನಕ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಪೊಲೀಸರು ಆರೋಪಿಯಿಂದ 90 ಎಂ ಎಲ್ 46 ರಾಜಾ ವಿಸ್ಕಿ ಮದ್ಯದ ಪಾಕೆಟುಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪಂಚರಾಗಿ ಸಹಕರಿಸಲು ನಿಪಿ1 ರಂತೆ ನೋಟೀಸು ನೀಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಮದ್ಯ ಮಾರಾಟ ಮಾಡಲು ಪರವಾನಗೆ ಇಲ್ಲದಿದ್ದರು ಆತ ಮದ್ಯ ಮಾರಾಟ

ಮಾಡುತ್ತಿದ್ದ ಕಾರಣ ಸದರಿ ಮದ್ಯವನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ4 ಪೋಟೋ ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಎಲ್ಲಾ ವಿಷಯಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ</u> ಆರೋಪಿ ಪರ ಶ್ರೀ ಎನ್ ಎಸ್ ವಕೀಲರಿಂದ ಃ ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

<u>ಮರು ವಿಚಾರಣೆ ಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಒ,

ಸಹಿ/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.